ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಕೋವಿಡ್-19 ಆಸ್ಪತ್ರೆಗಳ ಬಗ್ಗೆ

ಶ್ರೀ ಜಿ. ರಘು ಆಚಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

97 (96) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕರ್ನಾಟಕ ರಾಜ್ಯದಲ್ಲಿ ಕೋವಿಡ್-19 ನಿರ್ವಹಣೆಗಾಗಿ ಹೊಸದಾಗಿ ತೆರೆಯಲಾಗಿರುವ ಕೋವಿಡ್ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೋವಿಡ್-19 ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಇದರಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಇ) ರಾಜ್ಯದ ವಿವಿಧೆಡೆ ಕೋವಿಡ್-19 ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ ಸಂಬಳ ನೀಡುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)